# ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಬೆಳ್ತಂಗಡಿ

## ಸಿಸಿ ಸಂಖ್ಯೆ: 411/2024

| | | |
|---|---|---|
| ಹೆಸರು | : | ಮೋಹನ |
| ತಂದೆಯ ಹೆಸರು | : | ಡೀಕಯ್ಯ ಗೌಡ |
| ಪ್ರಾಯ | : | 37 ವರ್ಷ |
| ಉದ್ಯೋಗ | : | ಕೂಲಿ ಕೆಲಸ |
| ವಾಸ | : | ಮಿತ್ತಬಾಗಿಲು ಗ್ರಾಮ, ಬೆಳ್ತಂಗಡಿ ತಾಲೂಕು |

**ದಿನಾಂಕ 05.08.2025 ರಂದು ಸಾಕ್ಷಿಯನ್ನು ಕರೆಸಿ ವಿಧಿಬದ್ಧವಾಗಿ ಪ್ರಮಾಣವಚನ ಭೋಧಿಸಲಾಯಿತು.**

ಮುಖ್ಯ ವಿಚಾರಣೆ ಮಾನ್ಯ ಸ. ಸ. ಅ. ರವರಿಂದಃ

ದಿಃ 18.10.2023 ರಂದು ನಾನು ಕೂಲಿ ಕೆಲಸಕ್ಕೆ ಹೋಗುವಾಗ ಬೊಳ್ಳಾಜೆಯ ಬೂಬಯ್ಯ ಪೂಜಾರಿ ರವರ ಜಾಗದಲ್ಲಿ ಮಾತನಾಡಿಕೊಂಡು ಹೋಗುತ್ತಿರುವಾಗ ಆರೋಪಿಯು ಬೈಕಿನಲ್ಲಿ ಬಂದು ಅವಾಚ್ಯವಾಗಿ ಬೇವರ್ಸಿ, ನಾಯಿಂಡ ಮಗ ಎಂದು ಬೈದು ದೊಣ್ಣೆಯಿಂದ ಬಲಗೈ ಮೊಣಗಂಟಿಗೆ ಹಲ್ಲೆ ಮಾಡಿರುತ್ತೇನೆ. ಅಲ್ಲದೆ ಕಾಲಿನ ಮಣಿಗಂಟಿಗೂ ಸಹ ಹಲ್ಲೆ ಮಾಡಿರುತ್ತಾನೆ. ಮುಷ್ಟಿ ಹಿಡಿದು ಕೈಯಿಂದ ನನ್ನ ಎಡಗಣ್ಣಿಗೆ ಹಲ್ಲೆ ಮಾಡಿರುತ್ತಾನೆ. ಆರೋಪಿ ಹಲ್ಲೆ ಮಾಡಿದಾಗ ನಾನು ಬೊಬ್ಬೆ ಹಾಕಿರುತ್ತೇನೆ, ಆಗ ಚಾಸಾ2 ರವರು ನನ್ನ ಜಗಳ ಬಿಡಿಸಿರುತ್ತಾರೆ. ಆ ಸಮಯದಲ್ಲಿ ನಮ್ಮ ಮನೆಯಿಂದ ನನ್ನ ಹೆಂಡತಿ ಸ್ಥಳಕ್ಕೆ ಬಂದಿರುತ್ತಾರೆ. ಆಗ ಆರೋಪಿಯು ಸ್ಥಳದಿಂದ ಹೊರಟುಹೋಗಿರುತ್ತಾನೆ. ಪುನಃ ಆರೋಪಿ ಸ್ಥಳಕ್ಕೆ ಬಂದಾಗ ನನ್ನ ಹೆಂಡತಿ ಚಾಸಾ3 ರವರು ಆರೋಪಿಯನ್ನು ನೋಡಿ ಹೆದರಿಕೊಂಡು ಕೆಳಗೆ ಬಿದ್ದಿರುತ್ತಾರೆ. ನಂತರ ನಾನು ಮತ್ತು ಚಾಸಾ3 ರವರು ಬೆಳ್ತಂಗಡಿ ಸರ್ಕಾರಿ ಆಸ್ಪತ್ರೆಗೆ ಚಿಕಿತ್ಸೆಗಾಗಿ ಬಂದಿರುತ್ತೇವೆ. ನಂತರ ಪೊಲೀಸರು ಆಸ್ಪತ್ರೆಗೆ ಬಂದು ಹೇಳಿಕೆ ದೂರನ್ನು ಪಡೆದುಕೊಂಡಿರುತ್ತಾರೆ. ಹೇಳಿಕೆ ದೂರಿನಲ್ಲಿರುವ ತನ್ನ ಸಹಿಯನ್ನು ಸಾಕ್ಷಿ ನೋಡಿ ಗುರುತಿಸಿದ್ದು ಅದನ್ನು ನಿಪಿ1 ಎಂದು ಸಾಕ್ಷಿ ಸಹಿಯನ್ನು ನಿಪಿ1(ಎ) ಎಂದು ಗುರುತಿಸಲಾಯಿತು.

ನಂತರ ಪೊಲೀಸರು ಮರುದಿನ ದಿಃ 19.10.2023 ರಂದು ಸ್ಥಳಕ್ಕೆ ಮಹಜರ್ ಮಾಡಲು ಬಂದಿದ್ದು, ಆಗ ಸ್ಥಳವನ್ನು ಪೊಲೀಸರಿಗೆ ನಾನೇ ತೋರಿಸಿಕೊಟ್ಟಿರುತ್ತೇನೆ. ಆ ಸಮಯದಲ್ಲಿ ಸ್ಥಳದಲ್ಲಿ ಚಾಸಾ4 ಮತ್ತು 5 ರವರು ಇದ್ದರು. ಪೊಲೀಸರು ಸ್ಥಳದಲ್ಲಿ 11 ಗಂಟೆಯಿಂದ 12 ಗಂಟೆಯವರೆಗೆ ಮಹಜರ್ ಮಾಡಿ ಸಹಿ ಪಡೆದುಕೊಂಡಿರುತ್ತಾರೆ. ಅಲ್ಲದೆ ಕೃತ್ಯಕ್ಕೆ ಬಳಸಿದ ದೊಣ್ಣೆಯನ್ನು ಸಹ ಸ್ವಾಧೀನಪಡಿಸಿಕೊಂಡಿರುತ್ತಾರೆ. ಮಹಜರ್ ನಲ್ಲಿರುವ ತನ್ನ ಸಹಿಯನ್ನು ಸಾಕ್ಷಿ ನೋಡಿ ಗುರುತಿಸಿದ್ದು ಮಹಜರ್ ನ್ನು ನಿಪಿ2 ಎಂದು ಸಾಕ್ಷಿ ಸಹಿಯನ್ನು ನಿಪಿ2(ಎ) ಎಂದು ಗುರುತಿಸಲಾಯಿತು. ಮಹಜರ್ ಮಾಡುವಾಗ ಪೊಲೀಸರು ಸ್ಥಳಕ್ಕೆ ಫೋಟೋವನ್ನು ಸಹ ತೆಗೆದಿರುತ್ತಾರೆ. ಸದರಿ ಫೋಟೋವನ್ನು ಸಾಕ್ಷಿ ನೋಡಿ ಗುರುತಿಸಿದ್ದು ಅದನ್ನು ನಿಪಿ3 ಎಂದು, ಸಿ.ಡಿಯನ್ನು ನಿಪಿ3(ಎ) ಎಂದು ಗುರುತಿಸಲಾಯಿತು. ಆರೋಪಿ ಸ್ಥಳಕ್ಕೆ ಬಂದಿದ್ದ ಬೈಕನ್ನು ನೋಡಿದರೆ ಗುರುತಿಸಬಲ್ಲೆ. ಆರೋಪಿ ಹಲ್ಲೆ ಮಾಡಿದ ದೊಣ್ಣೆಯನ್ನು ನೋಡಿದರೆ ಗುರುತಿಸಬಲ್ಲೆ. ಸಾಕ್ಷಿ ನ್ಯಾಯಾಲಯದ ಮುಂದಿರುವ ದೊಣ್ಣೆಯನ್ನು ನೋಡಿ ಗುರುತಿಸಿದ್ದು ಅದನ್ನು ಮು.ಮಾ1 ಎಂದು ಗುರುತಿಸಲಾಯಿತು.

( ಈ ಹಂತದಲ್ಲಿ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರು ಮುಂದುವರಿದ ಮುಖ್ಯ ವಿಚಾರಣೆಗೆ ಕಾಲಾವಕಾಶ ಕೋರಿದ್ದು ಮುಂದೂಡಲಾಯಿತು)

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಿಸಲಾಯಿತು)

ಪ್ರಧಾನ ಸಿವಿಲ್ ನ್ಯಾಯಾಧೀಶರು

(ಸಾ.ಓ.ಹೇ.ಕೇ.ಸ.ಇ.ಎ.ಒ) ಮತ್ತು ಪ್ರ.ದ.ನ್ಯಾದಂ. ಬೆಳ್ತಂಗಡಿ